**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ** :

ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಸಿ/ಎಸ್.ಟಿ ಪ್ರವರ್ಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ "ವಿಶ್ವಾಸ ಕಿರಣ" ಎಂಬ ಯೋಜನೆಯಡಿಯಲ್ಲಿ ನಡೆಯುತ್ತಿದ್ದ ಆಂಗ್ಲಭಾಷಾ ತರಬೇತಿ ಕಾರ್ಯಕ್ರಮವನ್ನು ಕಳೆದ ಎರಡು ವರ್ಷಗಳಿಂದ ಅನುದಾನದ ಕೊರತೆಯಿಂದ ಸ್ಥಗಿತಗೊಳಿಸಲಾಗಿರುತ್ತದೆ. ಇದರಿಂದ ಆಂಗ್ಲಭಾಷೆಯಲ್ಲಿ ಹಿಂದುಳಿದ ಗ್ರಾಮಾಂತರ ಪ್ರದೇಶದ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಕಲಿಕೆಯಲ್ಲಿ ಪ್ರಗತಿ ಸಾಧಿಸಿ ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಹೊಂದಲು ಸಹಕಾರಿಯಾಗುತ್ತಿತ್ತು. ಆಂಗ್ಲಭಾಷಾ ಸಂಪನ್ಮೂಲ ವ್ಯಕ್ತಿಗಳಿಂದ ಕೌಶಲ್ಯ ಅಭಿವೃದ್ಧಿ ಹೊಂದಿದ ಹಿನ್ನೆಲೆಯಲ್ಲಿ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಆಂಗ್ಲಭಾಷಾ ಪ್ರೌಢಿಮೆ ಉತ್ತಮಗೊಂಡು ಉನ್ನತ ವಿದ್ಯಾಭ್ಯಾಸ ಮಾಡಲು ಸಹಕಾರಿಯಾಗುತ್ತಿತ್ತು.

ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಸಿ.ಇ.ಟಿ ಮತ್ತು ನೀಟ್ ಪರೀಕ್ಷೆಗೂ ಸಹ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ತರಬೇತಿ ನೀಡಿ, ಹೆಚ್ಚಿನ ಅಂಕಗಳಿಸಿ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಸೀಟು ದೊರಕಿಸಿಕೊಳ್ಳಲು ಅವಕಾಶ ಮಾಡಿಕೊಟ್ಟು ಸೂಕ್ತ ಅನುದಾನ ಬಿಡುಗಡೆ ಮಾಡಬೇಕಾದ ಅಗತ್ಯವಿರುತ್ತದೆ. ಆದರೆ ಸದರಿ ಯೋಜನೆಯಡಿ ಅನುದಾನ ಸ್ಥಗಿತಗೊಳಿಸಿರುವುದು ಹಾಗೂ ತರಬೇತಿ ಕಾರ್ಯಕ್ರಮ ಸ್ಥಗಿತಗೊಂಡಿರುವುದರಿಂದ ಲಕ್ಷಾಂತರ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ವಂಚಿತರಾಗಿರುವುದು ಶೋಚನೀಯ ಸಂಗತಿ, ಆದಕಾರಣ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸದರಿ ವಿಷಯವನ್ನು ಆದ್ಯತೆ ಮೇರೆಗೆ ಅತಿ ಜರೂರು ಎಂದು ಪರಿಗಣಿಸಿ, ಸರ್ಕಾರಿ ಪದವಿಪೂರ್ವ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳಿಗೂ "ವಿಶ್ವಾಸ ಕಿರಣ" ಯೋಜನೆಯನ್ನು ಎಂದಿನಂತೆ ಮುಂದುವರೆಸುವಂತೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರನ್ನು ಒತ್ತಾಯಿಸುತ್ತೇನೆ.

**ಉತ್ತರ:-**

"ವಿಶ್ವಾಸ ಕಿರಣ" ಕಾರ್ಯಕ್ರಮವು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ " ಆಂಗ್ಲ ಭಾಷೆ" ಬಳಕೆಯ ಕೌಶಲ್ಯವನ್ನು ಹೆಚ್ಚಿಸುವ ಹಿನ್ನೆಲೆಯಲ್ಲಿ ಅರಂಭಿಸಲಾಗಿತ್ತು. ಈ ಕಾರ್ಯಕ್ರಮವು 2016-17ನೇ ಸಾಲಿನಿಂದ ಆರಂಭಗೊಂಡಿದ್ದು ಮಧ್ಯಂತರ ರಜಾ ಅವಧಿಯಲ್ಲಿ ನಡೆಯುತ್ತಿದ್ದು, 2021-22ನೇ ಸಾಲಿನವರೆಗೂ ಹಮ್ಮಿಕೊಳ್ಳಲಾಗಿತ್ತು.

2022-23ನೇ ಶೈಕ್ಷಣಿಕ ಸಾಲಿನಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಹೆಚ್ಚಿನ ಅನುದಾನ ಒದಗಿಸಿಲ್ಲದ ಕಾರಣ ಕಾರ್ಯಕ್ರಮವನ್ನು ನಡೆಸಿರುವುದಿಲ್ಲ.

2023-24ನೇ ಸಾಲಿನಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯ ಲೆಕ್ಕಶೀರ್ಷಿಕೆ:2202-02-107-3-02-422/423 ರಡಿ ರೂ.240.39.00ಲಕ್ಷಗಳ ಅನುದಾನ ಒದಗಿಸಲಾಗಿದ್ದು, ಸದರಿ ಅನುದಾನವನ್ನು ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಶುಲ್ಕ ಮರುಪಾವತಿಗಾಗಿ ಒದಗಿಸಲಾಗಿದೆ.

ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಆಧರಿಸಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಹೆಚ್ಚುವರಿ ಅನುದಾನ ಒದಗಿಸಿದಲ್ಲಿ "ವಿಶ್ವಾಸ ಕಿರಣ" ಕಾರ್ಯಕ್ರಮ ಹಮ್ಮಿಕೊಳ್ಳಲು ಅಗತ್ಯ ಕ್ರಮವಹಿಸಲಾಗುತ್ತದೆ.

**ಸಂಖ್ಯೆ : ಇಪಿ 289 ಯೋಸಕ 2023**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**